## ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 02 ರಾರಾಆ 2020

ಕರ್ನಾಟಕ ಸರ್ಕಾರ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು: ದಿನಾಂಕ: 13.01.2020.

## ಅಧಿಕೃತ ಜ್ಞಾಪನ

ವಿಷಯ: 2020ರ ಜನವರಿ 30 ರಂದು ಪೂರ್ವಾಹ್ನ 11.00 ಗಂಟೆಗೆ ದೇಶದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಹುತಾತ್ಮರಾದವರ ಜ್ಞಾಪಕಾರ್ಥವಾಗಿ ಮೌನ ಆಚರಿಸುವ ಬಗ್ಗೆ.

*****

ಭಾರತದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಪ್ರಾಣತೆತ್ತು ಹುತಾತ್ಮರಾದವರ ಸ್ಮರಣಾರ್ಥವಾಗಿ ಪ್ರತಿವರ್ಷ ಜನವರಿ 30ರಂದು ಪೂರ್ವಾಹ್ನ 11.00 ಗಂಟೆಗೆ ಮೌನ ಆಚರಿಸುವಾಗ ಅನುಸರಿಸಬೇಕಾದ ಕ್ರಮಗಳ ಬಗ್ಗೆ ಪ್ರತಿ ವರ್ಷವೂ ಸೂಚನೆಗಳನ್ನು ನೀಡಲಾಗುತ್ತಿದೆ. ಹುತಾತ್ಮರ ಸ್ಮರಣಾರ್ಥವಾಗಿ ಜನವರಿ 30ರಂದು ನಡೆಸುವ ಮೌನ ಆಚರಣೆಗೆ ಭಾರತ ಸರ್ಕಾರದ ಸೂಚನೆಗಳಂತೆ ಸ್ಥಾಯಿ ಸೂಚನೆಗಳನ್ನು ನೀಡಲಾಗಿದೆ.

1) ಜನವರಿ 30 ರಂದು ಪೂರ್ವಾಹ್ನ 11:00 ಗಂಟೆಗೆ ರಾಜ್ಯದೆಲ್ಲೆಡೆ 2 ನಿಮಿಷಗಳ ಕಾಲ ಮೌನ ಆಚರಿಸುವುದು.

2) ಎಲ್ಲಿ ಸೈರನ್‌ಗಳು ಅಥವಾ ಸೈನಿಕರ ಬಂದೂಕುಗಳು ಲಭ್ಯವಿವೆಯೋ ಅಂತಹ ಕಡೆಗೆ ಎರಡು ನಿಮಿಷಗಳು ಮೌನ ಆಚರಣೆಯ ಕಾಲವನ್ನು ಪ್ರಾರಂಭ ಮತ್ತು ಮುಕ್ತಾಯಕ್ಕೆ ಸೈರನ್ ಅಥವಾ ಸೈನಿಕರ ಬಂದೂಕುಗಳ ಶಬ್ದದ ಮೂಲಕ ಎರಡು ನಿಮಿಷ ಮೌನ ಆಚರಣೆ ಪೂರ್ವಾಹ್ನ 10.59 ರಿಂದ 11.00 ಗಂಟೆಯವರೆಗೆ ಸೈರನ್ ಬಂದೂಕು ಶಬ್ಧ ಮಾಡಿಸುವುದು ಹಾಗೂ ಎರಡು ನಿಮಿಷದ ಮೌನ ಆಚರಣೆಯ ನಂತರ ಪುನಃ 11.02 ರಿಂದ 11.03 ನಿಮಿಷದವರೆಗೆ ಸೈರನ್/ಬಂದೂಕು ಶಬ್ದವನ್ನು ಮಾಡಿಸುವುದು. ಈ ಪದ್ಧತಿಯನ್ನು ಸೈರನ್/ಬಂದೂಕು ಸೌಲಭ್ಯವಿರುವ ಕಡೆ ಅಳವಡಿಸಿಕೊಳ್ಳುವುದು.

3) ಸಾಧ್ಯವಾಗುವಂತಹ ಸಂದರ್ಭದಲ್ಲಿ ಎಲ್ಲರೂ ಒಂದೆಡೆ ಸೇರಿ ಮೌನವನ್ನು ಆಚರಿಸಬೇಕು. ಆದಾಗ್ಯೂ, ಇದು ಕೆಲಸ ಕಾರ್ಯಗಳಿಗೆ ತೀವ್ರ ತೊಂದರೆ ಆಗುವಂತಿದ್ದರೆ ಮೇಲೆ ತಿಳಿಸಿದಂತೆ ಒಂದೇ ಸ್ಥಳದಲ್ಲಿ ಸೇರಲು ಪ್ರಯತ್ನಿಸದೇ ಇರಬಹುದು.

4) ಸಂಕೇತ (Signal) ವ್ಯವಸ್ಥೆ ಇರದಂತಹ ಪ್ರದೇಶದಲ್ಲಿ, ಬೆಳಗ್ಗೆ 11.00 ಗಂಟೆಗೆ 2 ನಿಮಿಷಗಳ ಮೌನ ಆಚರಿಸಲು ಸಂಬಂಧಪಟ್ಟವರಿಗೆಲ್ಲ ಸೂಕ್ತ ನಿರ್ದೇಶನವನ್ನು ಕಳುಹಿಸುವುದು.

2. ಹುತಾತ್ಮರ ದಿನಾಚರಣೆಯನ್ನು ತಪ್ಪದೇ ಆಚರಿಸಬೇಕಾಗಿರುವುದರಿಂದ, ಈ ಉದ್ದೇಶಕ್ಕಾಗಿ ಕೆಳಕಾಣಿಸಿದ ಕ್ರಮಗಳನ್ನು ಕೈಗೊಳ್ಳಬೇಕೆಂದು ಕೋರಲಾಗಿದೆ.

(1) ಹುತಾತ್ಮರ ದಿನವನ್ನು ಪೂರ್ಣ ಪಾವಿತ್ರ್ಯತೆ ಮತ್ತು ಯೋಗ್ಯವಾದ (befitting) ರೀತಿಯಲ್ಲಿ ಆಚರಿಸಲು ರಾಜ್ಯದ ಎಲ್ಲಾ ವಿದ್ಯಾ ಸಂಸ್ಥೆಗಳಿಗೆ ಸೂಚನೆಗಳನ್ನು ನೀಡುವುದು. ಈ ದಿನದ ವಿಶೇಷತ್ವಕ್ಕೆ ಸಂಬಂಧಿಸಿದಂತೆ ಭಾಷಣಗಳನ್ನು, ಅದರಲ್ಲೂ ವಿಶೇಷವಾಗಿ ಭಾರತದ ಸ್ವಾತಂತ್ರ್ಯದಲ್ಲಿ ಸ್ವಾತಂತ್ರ್ಯ ಹೋರಾಟಗಾರರ ಪಾತ್ರವನ್ನು ತಿಳಿಸುವಂತಹ ಭಾಷಣ/ ಚರ್ಚೆಗಳನ್ನು ಏರ್ಪಡಿಸಬೇಕು. ಈ ಭಾಷಣಗಳ ಮುಖ್ಯಾಂಶಗಳಲ್ಲಿ ಕಷ್ಟಪಟ್ಟು ಗಳಿಸಿದ ಸ್ವಾತಂತ್ರ್ಯವನ್ನು ಉಳಿಸುವುದು, ಸಂರಕ್ಷಿಸುವುದು ಮತ್ತು ಶ್ರೀಮಂತಗೊಳಿಸುವುದಲ್ಲದೆ ರಾಷ್ಟ್ರದ ಐಕ್ಯತೆಯನ್ನು ಉತ್ತೇಜಿಸುವುದು ಮತ್ತು ಒಂದೇ ಗುರಿಗಳು ಮತ್ತು ಆದರ್ಶಗಳಿಗೆ ಬದ್ಧರಾಗುವ ಅಂಶಗಳನ್ನೊಳಗೊಂಡಿರಬೇಕು.

. . . 2

(2)ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಹುತಾತ್ಮರಾದವರ ಪಾತ್ರ ಮತ್ತು ರಾಷ್ಟ್ರೀಯ ಐಕ್ಯತೆಯ (National Integration) ಮೂಲ ಉದ್ದೇಶಗಳು ಇರುವ ಸಾಂಸ್ಕೃತಿಕ ಕಾರ್ಯಕ್ರಮಗಳ/ ಡಾಕ್ಯುಮೆಂಟರಿ ಚಿತ್ರಗಳ ಪ್ರದರ್ಶನಗಳ ಏರ್ಪಾಡುಗಳನ್ನು ರಾಜ್ಯದ ಪ್ರಚಾರ ಘಟಕಗಳು ಮಾಡಬಹುದು.

3. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳು, ಎಲ್ಲಾ ಪ್ರಾದೇಶಿಕ ಆಯುಕ್ತರು, ಇಲಾಖಾ ಮುಖ್ಯಸ್ಥರು, ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಮತ್ತಿತರೆ ಸಂಬಂಧಪಟ್ಟ ಅಧಿಕಾರಿಗಳು ಮೇಲೆ ಸೂಚಿಸಿರುವ ನಿರ್ದೇಶನಗಳನ್ನು ತಕ್ಕುದಾದ ರೀತಿಯಲ್ಲಿ ಅನುಸರಿಸಲು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಕೋರಲಾಗಿದೆ.

ಕೆ.ಎಸ್. ರೋಹಿಣಿ

(ಕೆ.ಎಸ್. ರೋಹಿಣಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಆಸುಇ(ರಾಜಕೀಯ)

<u>ಇವರಿಗೆ:</u>

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
2. ಘನತೆವೆತ್ತ ರಾಜ್ಯಪಾಲರ ವಿಶೇಷ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
3. ಕಾರ್ಯದರ್ಶಿ, ಕರ್ನಾಟಕ ವಿಧಾನ ಪರಿಷತ್, ವಿಧಾನ ಸೌಧ, ಬೆಂಗಳೂರು.
4. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ, ವಿಧಾನ ಸೌಧ, ಬೆಂಗಳೂರು.
5. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
6. ಎಲ್ಲಾ ಪ್ರಾದೇಶಿಕ ಆಯುಕ್ತರು.
7. ಎಲ್ಲಾ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೋಲೀಸ್.
8. ಎಲ್ಲಾ ಇಲಾಖಾ ಮುಖ್ಯಸ್ಥರು.
9. ಎಲ್ಲಾ ಜಿಲ್ಲಾಧಿಕಾರಿಗಳು.
10. ಎಲ್ಲಾ ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು.
11. ಎಲ್ಲಾ ವಿಶ್ವವಿದ್ಯಾಲಯಗಳ ರಿಜಿಸ್ಟ್ರಾರ್‌ಗಳು.
12. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
13. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
14. ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ.
15. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-1).

ಸಂಖ್ಯೆ: ಡಿಟಿಇ/ಎನ್‌ಎಸ್‌ಎಸ್/01/ಐಡಿಪಿ/2019-20 ದಿನಾಂಕ: 28.01.2020

**ಹಿಂಬರಹ**

ಸರ್ಕಾರದ ಅಧೀನ ಕಾರ್ಯದರ್ಶಿಗಳು ಸಿಆಸುಇ 02 ರಾರಾಆ 2020 ದಿನಾಂಕ: 13-01-2020 ಇವರ ಪತ್ರವನ್ನು ತಾಂತ್ರಿಕ ಶಿಕ್ಷಣ ನಿರ್ದೇಶನಾಲಯಕ್ಕೊಳ್ಳಪಡುವ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.

ನಿರ್ದೇಶಕರು

ಇವರಿಗೆ ;-

1) ತಾಂತ್ರಿಕ ಶಿಕ್ಷಣ ಇಲಾಖೆಗೊಳಪಡುವ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಪ್ರಾಚಾರ್ಯರುಗಳ ಮಾಹಿತಿಗಾಗಿ ಮತ್ತು ಸೂಕ್ತ -ಕ್ರಮಕ್ಕಾಗಿ.
2) ಇ-ಆಡಳಿತ ವಿಭಾಗ
3) ಕಛೇರಿ ಕಡತ